ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE :

# ರಮೇಶ್‌ಕುಮಾರ್ ವಿರುದದ ಹಗರಣ ಸಿಬಿಐ ತನಿಖೆಗೆ ಆಗ್ರಹ

**ಬೆಂಗಳೂರು:** ಮಾಜಿ ಸ್ಪೀಕರ್ ರಮೇಶ್‌ಕುಮಾರ್ ವಿರುದ್ಧದ ಸರಕಾರಿ ಭೂಮಿ ಒತ್ತುವರಿ ಒಳಗೊಂಡು ಎಲ್ಲ ಅಕ್ರಮ ಆರೋಪಗಳನ್ನು ಸಿಬಿಐ ತನಿಖೆಗೆ ಒಪ್ಪಿಸುವಂತೆ ಜೆಡಿಎಸ್ ಮುಖಂಡ ಹಾಗೂ ಮಾಜಿ ಶಾಸಕ ಜಿ.ಕೆ.ವೆಂಕಟಶಿವಾರೆಡ್ಡಿ ರಾಜ್ಯ ಸರಕಾರವನ್ನು ಆಗ್ರಹಿಸಿದ್ದಾರೆ.

ವಿಧಾನಸೌಧದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ''ಅರಣ್ಯ ಹಾಗೂ ಕಂದಾಯ ಇಲಾಖೆ ಭೂಮಿ ಒತ್ತುವರಿ ಹಾಗೂ ಹಿಂದೆ ಆರೋಗ್ಯ ಸಚಿವರಾಗಿದ್ದ ಅವಧಿಯಲ್ಲಿ ಔಷಧ, ಆ್ಯಂಬುಲೆನ್ಸ್ ಖರೀದಿಯಲ್ಲಿ ನಡೆಸಿದ ಅಕ್ರಮಗಳ ಬಗ್ಗೆ ಸಿಬಿಐ ತನಿಖೆ ನಡೆಸುವಂತೆ ಸಿಎಂ ಬಿ.ಎಸ್.ಯಡಿಯೂರಪ್ಪ ಅವರಿಗೆ ಮನವಿ ಸಲ್ಲಿಸಲಾಗುವುದು'' ಎಂದು ತಿಳಿಸಿದರು.

''ರಮೇಶ್‌ಕುಮಾರ್ ರಾಜ್ಯದ ಅತೀ ಶ್ರೀಮಂತ ರಾಜಕಾರಣಿ. ಬೆಂಗಳೂರಿನ ಹೆಗಡೆ ನಗರದಲ್ಲಿ ಕಾಲು ಎಕರೆಯಲ್ಲಿ ಬೃಹತ್ ಬಂಗಲೆ ಕಟ್ಟಿಸುತ್ತಿದ್ದಾರೆ. ಆರೋಗ್ಯ ಸಚಿವರಾಗಿದ್ದ ಅವಧಿಯಲ್ಲಿ ಔಷಧ, ಆ್ಯಂಬುಲೆನ್ಸ್ ಖರೀದಿಯಲ್ಲಿ 535.22 ಕೋಟಿ ರೂ. ಅವ್ಯವಹಾರ ನಡೆದಿರುವ ಬಗ್ಗೆ ಸಿಎಜಿ ವರದಿಯಲ್ಲೇ ಹೇಳಲಾಗಿದೆ,'' ಎಂದು ಆಪಾದಿಸಿದರು.

''ಶ್ರೀನಿವಾಸಪುರದಲ್ಲಿ ಅಧಿಕಾರಿಗಳನ್ನು ಬೆದರಿಸಿ 120 ಎಕರೆ ಅರಣ್ಯ ಹಾಗೂ ಕಂದಾಯ ಇಲಾಖೆ ಜಮೀನು ಒತ್ತುವರಿ ಮಾಡಿಕೊಂಡು ಸ್ವಾಧೀನದಲ್ಲಿಟ್ಟುಕೊಂಡಿದ್ದಾರೆ. ಜತೆಗೆ, ಶ್ರೀನಿವಾಸಪುರ ತಾಲೂಕಿನ ಹೊಸಹುಡ್ಯ ಗ್ರಾಮದಲ್ಲೂ ಸರಕಾರಿ ಜಮೀನು ಒತ್ತುವರಿ ಮಾಡಿಕೊಂಡಿದ್ದಾರೆ. ಒತ್ತುವರಿ ಮಾಡಿಕೊಂಡ ಜಮೀನು ಅಡವಿಟ್ಟು ಬ್ಯಾಂಕ್‌ನಲ್ಲಿ 1.50 ಕೋಟಿ ರೂ. ಸಾಲ ಪಡೆದಿದ್ದಾರೆ. ಒತ್ತುವರಿ ಪ್ರಕರಣ ಸಂಬಂಧ ಅರಣ್ಯ ಮತ್ತು ಕಂದಾಯ ಇಲಾಖೆಗಳ ಜಂಟಿ ಸಮೀಕ್ಷೆಗೆ ಸಹಕಾರ ಕೊಡುತ್ತಿಲ್ಲ'' ಎಂದು ಆಪಾದಿಸಿದರು.

''ರಮೇಶ್‌ಕುಮಾರ್ ವಿರುದ್ಧದ ಈ ಎಲ್ಲ ಆಪಾದನೆಗಳು ಸುಳ್ಳು ಎಂಬುದು ತನಿಖೆಯಿಂದ ಸಾಬೀತಾದರೆ ರಾಜಕೀಯ ನಿವೃತ್ತಿ ಸ್ವೀಕರಿಸುತ್ತೇನೆ'' ಎಂದು ಸವಾಲು ಹಾಕಿದರು.